# ಮೊಟ್ಟೆತ್ತಡ್ಕ ಡಿಸಿಆರ್‌ನಲ್ಲಿ ಭ್ರಷ್ಟಾಚಾರ ನಿರ್ಮೂಲನಾ ಜಾಗೃತಿ ಸಪ್ತಾಹ ಸಮಾರೋಪ

ಪುತ್ತೂರು: ಮೊಟ್ಟೆತ್ತಡ್ಕದಲ್ಲಿರುವ ಗೇರು ಸಂಶೋಧನಾ ನಿರ್ದೇಶನಾಲಯದಲ್ಲಿ ಒಂದು ವಾರ ಕಾಲ ನಡೆದ ಜಾಗೃತಿ ಸಪ್ತಾಹ - 2018ರ ಸಮಾರೋಪ ಸಮಾರಂಭ ನ. 3 ರಂದು ಗೇರು ಸಂಶೋಧನಾ ನಿರ್ದೇಶನಾಲಯ, ದಕ್ಷಿಣ ಕನ್ನಡ ಜಿಲ್ಲಾ ಕಾನೂನು ಸೇವಾ ಸಮಿತಿ, ತಾಲೂಕು ಕಾನೂನು ಸೇವಾ ಸಮಿತಿ ಹಾಗೂ ವಕೀಲರ ಸಂಘ, ಪುತ್ತೂರು ಇವರ ಸಂಯುಕ್ತ ಆಶ್ರಯದಲ್ಲಿ ನಡೆಯಿತು.

ಕಾರ್ಯಕ್ರಮವನ್ನು ಉದ್ಘಾಟಿಸಿದ ಪುತ್ತೂರು ನ್ಯಾಯಾಲಯದ ಹಿರಿಯ ಸಿವಿಲ್ ನ್ಯಾಯಾಧೀಶ ಮತ್ತು ಹೆಚ್ಚುವರಿ ಮುಖ್ಯ ನ್ಯಾಯಾಂಗ ಮ್ಯಾಜಿಸ್ಟ್ರೇಟ್, ಮಂಜುನಾಥರವರು ಮಾತನಾಡಿ, ಭ್ರಷ್ಟಾಚಾರದ ನಿರ್ಮೂಲನಕ್ಕೆ ಎಲ್ಲರೂ ಕೈ ಜೋಡಿಸುವ ಅಗತ್ಯವಿದೆಯೆಂದರು. ಅತಿಥಿಗಳಾದ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಎ. ಉದಯ ಶಂಕರ ಶೆಟ್ಟಿ, ವಕೀಲರ ಸಂಘದ ಅಧ್ಯಕ್ಷ ಕೆ ಭಾಸ್ಕರ, ಕೊಡಿಂಬಾಳರವರ ಮಾತನಾಡಿ, ದೇಶದಲ್ಲಿ ನಡೆಯುವ



ಭ್ರಷ್ಟಾಚಾರದ ಬಗ್ಗೆ ಹಾಗೂ ಅದರ ನಿರ್ಮೂಲನೆಯ ಬಗ್ಗೆ ತಿಳಿಸಿದರು. ಕಾರ್ಯಕ್ರಮದ ಸಂಪನ್ಮೂಲ ವ್ಯಕ್ತಿಯಾಗಿ ಆಗಮಿಸಿದ್ದ ನ್ಯಾಯವಾದಿ ಪ್ರಶಾಂತ ರೈ ಮಾಹಿತಿ ನೀಡಿದರು. ನಿರ್ದೇಶನಾಲಯದ ಪ್ರಭಾರ ನಿರ್ದೇಶಕರಾದ ಡಾ. ಎಮ್.ಜಿ. ನಾಯಕರವರು ಅಧ್ಯಕ್ಷತೆ ವಹಿಸಿದ್ದರು. ಜಯರಾಮ ನ್ಯಾಕ್ ವಂದಿಸಿದರು. ಹಿರಿಯ ವಿಜ್ಞಾನಿ ಡಾ. ಜಿ. ಎಸ್ ಮೋಹನ್ ಕಾರ್ಯಕ್ರಮ ನಿರೂಪಿಸಿದರು. ಮುರಲೀಕೃಷ್ಣ ಮತ್ತಿತರರು ಸಹಕರಿಸಿದರು. ವಕೀಲರ ಸಂಘದ ಕಾರ್ಯದರ್ಶಿ ಕೃಷ್ಣಪ್ರಸಾದ್ ರೈ ಉಪಸ್ಥಿತರಿದ್ದರು.